## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಎಂಬಸ್ಸಿ ಎನರ್ಜಿ ಪ್ರೈ ಲಿ. (M/s. Embassy Energy Pvt. Ltd.) ರವರಿಗೆ 100 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಕುರಿತು.

ಓದಲಾಗಿದೆ:
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 302.
2. ದಿನಾಂಕ : 27.02.2016ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ :-**

ಮೆ: ಎಂಬಸ್ಸಿ ಎನರ್ಜಿ ಪ್ರೈ ಲಿ. (M/s. Embassy Energy Pvt. Ltd.) ಕಂಪನಿಯವರು ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಗುಡೆಗುಡ್ಡ ಗ್ರಾಮದಲ್ಲಿ 100 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಏಕ ಕಡತ ಪದ್ಧತಿಯಡಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ಜಮೀನಿನ ವಿಧ | : | ಖಾಸಗಿ ಜಮೀನು |
| ಯೋಜನಾ ಪ್ರದೇಶದ Co-ordinate ವಿವರ | : | 16°05' N 75°79' E |
| ದಿನಾಂಕ: 31.03.2015ರ ಅಂತ್ಯಕ್ಕೆ ಕಂಪನಿಯ ನೆಟ್‌ವರ್ತ್ | : | ರೂ.70.51 ಕೋಟಿಗಳು |
| ಕಂಪನಿಯ CIN ನಂ. ಮತ್ತು ನೊಂದಣಿ ದಿನಾಂಕ | : | U40104KA2015PTC082514 / 27.08.2015. |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಸ್ವಂತಕ್ಕೆ ಅಥವಾ 3ನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ, | : | ಹೌದು. |

ದಿನಾಂಕ : 27.02.2016ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಈ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿಯು ಕೂಲಂಕಷವಾಗಿ ಪರಿಶೀಲಿಸಿ ಮೆ : ಎಂಬಸ್ಸಿ ಎನರ್ಜಿ ಪ್ರೈ ಲಿ. ಕಂಪನಿಯವರು ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಗುಡೆಗುಡ್ಡ ಗ್ರಾಮದಲ್ಲಿ 100 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣೆಯನ್ನು ನೀಡಬಹುದೆಂದು ಶಿಫಾರಸ್ಸು ಮಾಡಿರುತ್ತದೆ.

ಮೇಲ್ಕಂಡಂತೆ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 163 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 30.06.2016.**

ಮೆ : ಎಂಬಸ್ಸಿ ಎನರ್ಜಿ ಪ್ರೈ ಲಿ. (M/s. Embassy Energy Pvt. Ltd.) ಕಂಪನಿಯವರು under IPP category ಅಡಿ ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಗುಡೆಗುಡ್ಡ ಗ್ರಾಮದಲ್ಲಿ 100 ಮೆ.ವ್ಯಾ. ಸಾಮರ್ಥ್ಯದ ಸೋಲಾರ್ ವಿದ್ಯುತ್ ಘಟಕವನ್ನು ಸ್ಥಾಪಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;

--2)

2. ಮೆ: ಎಂಬಸ್ಸಿ ಎನರ್ಜಿ ಪ್ರೈ ಲಿ. ರವರು ಸೌರ ನೀತಿ 2014-21 ರನ್ವಯ ಅಗತ್ಯವಿರುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ವಿದ್ಯುತ್ ಘಟಕದಲ್ಲಿ ಉತ್ಪಾದನೆಯಾಗುವ ವಿದ್ಯುತ್ತನ್ನು ಕೆ.ಇ.ಆರ್.ಸಿ.ಯ ನಿಯಮಗಳನ್ವಯ ಅಭಿವೃದ್ಧಿದಾರರು ಸ್ವಂತಕ್ಕೆ ಬಳಸಿಕೊಳ್ಳಲು ಅಥವಾ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ;
3. ಮೆ: ಎಂಬಸ್ಸಿ ಎನರ್ಜಿ ಪ್ರೈ ಲಿ. ರವರು ಪ್ರಸ್ತಾಪಿತ ಸೋಲಾರ್ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
4. ಮೆ: ಎಂಬಸ್ಸಿ ಎನರ್ಜಿ ಪ್ರೈ ಲಿ. ರವರು ಸ್ಥಾಪಿಸುತ್ತಿರುವ ಈ ಸೋಲಾರ್ ವಿದ್ಯುತ್ ಘಟಕ ಸ್ಥಾಪನೆಗೆ ಸರ್ಕಾರದ 2014-21ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ;

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್).
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
☎ 22034674.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**
1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆ ರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು.
8 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕಲಬುರಗಿ.
9 M/s. Embassy Energy Pvt. Ltd., Embassy Point, 1st Floor, 150, Infantry Road, B'lore-01.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.